ಕರ್ನಾಟಕ ವಿಧಾನಸಭೆ

(15ನೇ ವಿಧಾನಸಭೆ)

ಹನ್ನೆರಡನೇ ಅಧಿವೇಶನ

ಕಾರ್ಯಕಲಾಪಗಳ ಪಟ್ಟಿ

ಗುರುವಾರ, ದಿನಾಂಕ 17ನೇ ಮಾರ್ಚ್, 2022

(ಸಮಯ: ಬೆಳಿಗ್ಗೆ 11.00 ಗಂಟೆಗೆ)

----

1. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಹದಿನೆಂಟನೇ ಪಟ್ಟಿ

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಹದಿನೆಂಟನೇ ಪಟ್ಟಿ

2. ಅರ್ಜಿಗಳನ್ನೊಪ್ಪಿಸುವುದು

ಶ್ರೀ ಆನಂದ ಅಲಿಯಾಸ್ ವಿಶ್ವನಾಥ ಚಂದ್ರಶೇಖರ ಮಾಮನಿ (ಮಾನ್ಯ ಉಪ ಸಭಾಧ್ಯಕ್ಷರು ಹಾಗೂ ಅಧ್ಯಕ್ಷರು, ಅರ್ಜಿಗಳ ಸಮಿತಿ) ಅವರು ಈ ಕೆಳಕಂಡ ಅರ್ಜಿಗಳನ್ನು ಒಪ್ಪಿಸುವುದು:

1. ಸವದತ್ತಿ ತಾಲ್ಲೂಕಿನ ಮುನವಳ್ಳಿ ಮತ್ತು ಸವದತ್ತಿ ರಸ್ತೆ ಮಾರ್ಗದಲ್ಲಿರುವ ನವಿಲುತೀರ್ಥ ಡ್ಯಾಂನ ನಿರೀಕ್ಷಣಾ ಮಂದಿರದ ಅವ್ಯವಸ್ಥೆಯ ಬಗ್ಗೆ.
2. ಸವದತ್ತಿ ಮತಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಶಿಂಗಾರಗೊಪ್ಪ-ಸವದತ್ತಿ ರಸ್ತೆ ದುರಸ್ಥಿ ಬಗ್ಗೆ

3. ಶಾಸನ ರಚನೆ

ವಿಧೇಯಕಗಳನ್ನು ಮಂಡಿಸುವುದು

1. **ಶ್ರೀ ಆರಗ ಜ್ಞಾನೇಂದ್ರ (ಮಾನ್ಯ ಗೃಹ ಸಚಿವರು) ಅವರು:-**

   ಅ) 2022ನೇ ಸಾಲಿನ ಕರ್ನಾಟಕ ಬಂದೀಖಾನೆಗಳ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ಕೋರುವುದು;

   ಆ) ಹಾಗೂ ವಿಧೇಯಕವನ್ನು ಮಂಡಿಸುವುದು.

2. **ಶ್ರೀ ಮುರುಗೇಶ್ ಆರ್. ನಿರಾಣಿ (ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವರು) ಅವರು:-**

   ಅ) 2022ನೇ ಸಾಲಿನ ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ಕೋರುವುದು;

   ಆ) ಹಾಗೂ ವಿಧೇಯಕವನ್ನು ಮಂಡಿಸುವುದು.

... 2/

4. ವಿತ್ತೀಯ ಕಾರ್ಯಕಲಾಪ

2022-23ನೇ ಸಾಲಿನ ಈ ಕೆಳಕಂಡ ಅನುದಾನ ಬೇಡಿಕೆಗಳ ಮೇಲೆ ಚರ್ಚೆ

ಅಭಿಯಾಚನೆ ಸಂಖ್ಯೆ	ಅಭಿಯಾಚನೆಯ ಹೆಸರು
01	ಕೃಷಿ ಮತ್ತು ತೋಟಗಾರಿಕೆ
05	ಒಳಾಡಳಿತ ಮತ್ತು ಸಾರಿಗೆ
07	ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್
10	ಸಮಾಜ ಕಲ್ಯಾಣ
11	ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ
14	ಕಂದಾಯ
20	ಲೋಕೋಪಯೋಗಿ
21	ಜಲಸಂಪನ್ಮೂಲ
23	ಕಾರ್ಮಿಕ ಮತ್ತು ಕೌಶಲ್ಯಾಭಿವೃದ್ಧಿ
08	ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ
09	ಸಹಕಾರ
13	ಆಹಾರ ಮತ್ತು ನಾಗರಿಕ ಸರಬರಾಜು
22	ಆರೋಗ್ಯ ಮತ್ತು ಕುಟುಂಬ ಕಲ್ಯಾಣ
24	ಇಂಧನ

5. ನಿಯಮ 69ರ ಮೇರೆಗೆ ಸಾರ್ವಜನಿಕ ಮಹತ್ವದ ಜರೂರು ವಿಷಯಗಳ ಬಗ್ಗೆ ಅಲ್ಪ ಕಾಲಾವಧಿ ಚರ್ಚೆ

1) **ಶ್ರೀಯುತರುಗಳಾದ ಹೆಚ್.ಡಿ. ಕುಮಾರಸ್ವಾಮಿ, ಎಂ. ಕೃಷ್ಣಾರೆಡ್ಡಿ, ಸುರೇಶ್‌ಗೌಡ, ವೆಂಕಟರಾವ್ ನಾಡಗೌಡ, ಬಂಡೆಪ್ಪ ಖಾಶೆಂಪೂರ್ ಹಾಗೂ ಇತರರು** – ರಾಜ್ಯದಲ್ಲಿ ನಡೆದ ಹಲವಾರು ಅಹಿತಕರ ಘಟನೆಗಳಿಂದ ಶಾಲಾ ಕಾಲೇಜುಗಳಲ್ಲಿ ವಿದ್ಯಾಭ್ಯಾಸ ಮಾಡಲು ಸಾಧ್ಯವಾಗದ ಪರಿಸ್ಥಿತಿ ಉಂಟಾಗಿದ್ದು, ಕಾನೂನು ಮತ್ತು ಸುವ್ಯವಸ್ಥೆಗೆ ಭಂಗ ಉಂಟಾಗಿರುವ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ.

2) **ಶ್ರೀಯುತರುಗಳಾದ ಕೆ.ಎಸ್. ಲಿಂಗೇಶ್, ಹೆಚ್.ಕೆ. ಕುಮಾರಸ್ವಾಮಿ, ಎಂ.ಪಿ. ಕುಮಾರಸ್ವಾಮಿ ಹಾಗೂ ಸಿ.ಎನ್. ಬಾಲಕೃಷ್ಣ ಇವರುಗಳು** – ರಾಜ್ಯದಲ್ಲಿನ ವಿವಿಧ ಭಾಗಗಳಲ್ಲಿ ಕಾಡಾನೆಗಳು ಹಾಗೂ ಇತರೆ ಕಾಡು ಪ್ರಾಣಿಗಳ ಹಾವಳಿಯಿಂದ ಉಂಟಾಗಿರುವ ಸಮಸ್ಯೆ ಹಾಗೂ ಪರಿಹಾರೋಪಾಯಗಳ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ.

3) **ಶ್ರೀಯುತರುಗಳಾದ ಪಿ. ರಾಜೀವ್, ಎನ್. ಮಹೇಶ್, ಗೂಳಿಹಟ್ಟಿ ಡಿ. ಶೇಖರ್, ಎಂ. ಚಂದ್ರಪ್ಪ ಹಾಗೂ ಇತರರು** – ರಾಜ್ಯದಲ್ಲಿ ಬೇಡ ಜಂಗಮ ಮತ್ತು ಬುಡಗ ಜಂಗಮ ಜಾತಿಯ ಜನಾಂಗದವರಿಗೆ ಪರಿಶಿಷ್ಟ ಜಾತಿ ಪ್ರಮಾಣ ಪತ್ರ ನೀಡುತ್ತಿರುವುದರಿಂದ ಅರ್ಹ ಪರಿಶಿಷ್ಟ ಜಾತಿ ಜನಾಂಗದವರು ಮೀಸಲಾತಿಯಿಂದ ವಂಚಿತರಾಗುತ್ತಿರುವ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ.

... 3/

4) **ಶ್ರೀಯುತರುಗಳಾದ ಸಿದ್ದರಾಮಯ್ಯ, ಡಾ. ಅಜಯ್ ಧರ್ಮಸಿಂಗ್, ಎಂ.ಬಿ. ಪಾಟೀಲ್, ಡಿ.ಕೆ. ಶಿವಕುಮಾರ್, ಕೃಷ್ಣ ಬೈರೇಗೌಡ ಹಾಗೂ ಇತರರು** – ರಾಜ್ಯದಲ್ಲಿ ಇತ್ತೀಚೆಗೆ ಸಂಭವಿಸುತ್ತಿರುವ ವಿದ್ಯಮಾನಗಳಿಂದ ಕುಸಿದು ಬೀಳುತ್ತಿರುವ ಕಾನೂನು ಸುವ್ಯವಸ್ಥೆಯನ್ನು ಸರಿಪಡಿಸುವ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ.

6. ಗಮನ ಸೆಳೆಯುವ ಸೂಚನೆಗಳು

1) **ಶ್ರೀ ಗೂಳಿಹಟ್ಟಿ ಡಿ. ಶೇಖರ್ ಅವರು** – ರಾಜ್ಯದಲ್ಲಿ ಮುಂದುವರೆದ ಸಮಾಜದವರಿಗೆ ಅಕ್ರಮವಾಗಿ ಪರಿಶಿಷ್ಟ ಜಾತಿಯ ಸುಳ್ಳು ಜಾತಿ ಪ್ರಮಾಣ ಪತ್ರಗಳನ್ನು ನೀಡುತ್ತಿರುವ ಅಧಿಕಾರಿಗಳು ಹಾಗೂ ಸದರಿ ಸುಳ್ಳು ಜಾತಿ ಪ್ರಮಾಣ ಪತ್ರಗಳನ್ನು ಪಡೆದವರ ವಿರುದ್ಧ ಕ್ರಮ ಜರುಗಿಸುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

2) **ಶ್ರೀಯುತರುಗಳಾದ ಟಿ. ರಘುಮೂರ್ತಿ, ಜೆ.ಎನ್. ಗಣೇಶ್, ಈ. ತುಕಾರಾಮ, ಅನಿಲ್ ಚಿಕ್ಕಮಾದು ಹಾಗೂ ಇತರರು** – ರಾಜ್ಯದಲ್ಲಿನ ಪರಿಶಿಷ್ಟ ಪಂಗಡದ ಜನಾಂಗದವರಿಗೆ ಮೀಸಲಾತಿ ಪ್ರಮಾಣವನ್ನು 3% ಯಿಂದ 7.5%ಗೆ ಹೆಚ್ಚಿಸುವ ಬೇಡಿಕೆಯ ಕುರಿತಂತೆ ರಚಿಸಿದಂತಹ ನಿವೃತ್ತ ನ್ಯಾಯಮೂರ್ತಿ ನಾಗಮೋಹನದಾಸ್ ವರದಿಯನ್ನು ಜಾರಿಗೊಳಿಸುವ ಬಗ್ಗೆ ಮಾನ್ಯ ಸಾರಿಗೆ ಹಾಗೂ ಪರಿಶಿಷ್ಟ ಪಂಗಡಗಳ ಕಲ್ಯಾಣ ಸಚಿವರ ಗಮನ ಸೆಳೆಯುವುದು.

3) **ಶ್ರೀ ಕೆ.ಎಂ. ಶಿವಲಿಂಗೇಗೌಡ ಅವರು** – ಭಾಗ್ಯಜ್ಯೋತಿ ಮತ್ತು ಕುಟೀರಜ್ಯೋತಿ ಯೋಜನೆಗಳಡಿ ನಿಗದಿಗಿಂತ ಹೆಚ್ಚು ಯೂನಿಟ್ ವಿದ್ಯುತ್ ಬಳಸಿ ಶುಲ್ಕ ಪಾವತಿಸದ ಫಲಾನುಭವಿಗಳ ವಿದ್ಯುತ್ ಸಂಪರ್ಕ ಕಡಿತಗೊಳಿಸುತ್ತಿರುವುದರಿಂದ ಆಗುತ್ತಿರುವ ತೊಂದರೆಯ ಬಗ್ಗೆ ಮಾನ್ಯ ಇಂಧನ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರ ಗಮನ ಸೆಳೆಯುವುದು.

4) **ಶ್ರೀ ಸಿ.ಎನ್. ಬಾಲಕೃಷ್ಣ ಅವರು** – ಹಾಸನ ಜಿಲ್ಲೆ ಚನ್ನರಾಯಪಟ್ಟಣ ತಾಲ್ಲೂಕು ಶ್ರವಣಬೆಳಗೊಳ ಹೋಬಳಿ ಕೋರೇನಹಳ್ಳಿಯಲ್ಲಿ ಇಂದಿರಾ ಗಾಂಧಿ ವಸತಿ ಶಾಲೆಗೆ ಕಾಯ್ದಿರಿಸಿರುವ ಭೂಮಿಯಲ್ಲಿ ನೂತನ ಕಟ್ಟಡವನ್ನು ಮಂಜೂರು ಮಾಡುವ ಬಗ್ಗೆ ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಗಮನ ಸೆಳೆಯುವುದು.

5) **ಶ್ರೀ ವೆಂಕಟರಾವ್ ನಾಡಗೌಡ ಅವರು** – ರಾಜ್ಯದಲ್ಲಿ ಆರ್.ಟಿ.ಐ. ಕಾರ್ಯಕರ್ತರಿಂದ ಅಧಿಕಾರಿಗಳಿಗೆ ಹಾಗೂ ಗುತ್ತಿಗೆದಾರರಿಗೆ ತೊಂದರೆಯಾಗುತ್ತಿರುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

6) **ಶ್ರೀ ಎಂ.ವೈ. ಪಾಟೀಲ್ ಅವರು** – ಅಫಜಲಪೂರ ಮತಕ್ಷೇತ್ರದಲ್ಲಿ ಭೀಮಾ ಏತ ನೀರಾವರಿಯಿಂದ ಕೆರೆಗಳನ್ನು ತುಂಬಿಸುವ ಯೋಜನೆಯ ಕಾಮಗಾರಿಯನ್ನು ತ್ವರಿತವಾಗಿ ಪೂರ್ಣಗೊಳಿಸುವ ಬಗ್ಗೆ ಮಾನ್ಯ ಜಲ ಸಂಪನ್ಮೂಲ ಸಚಿವರ ಗಮನ ಸೆಳೆಯುವುದು.

7) **ಶ್ರೀ ಹೆಚ್.ಕೆ. ಕುಮಾರಸ್ವಾಮಿ ಅವರು** – ಹಾಸನ ಜಿಲ್ಲೆ ಸಕಲೇಶಪುರ ತಾಲ್ಲೂಕು ಕುಂಬರಡಿ ಗ್ರಾಮದಲ್ಲಿ ಅಕ್ರಮ ವಿತರಣೆಯಾಗುತ್ತಿದ್ದ ಕಾರಣಕ್ಕಾಗಿ ಮಲೆನಾಡು ಯುವಕ ಸಂಘದವರು ನಡೆಸುತ್ತಿದ್ದ ನ್ಯಾಯ ಬೆಲೆ ಅಂಗಡಿಯನ್ನು ಅಮಾನತ್ತುಗೊಳಿಸಲು ಹೊರಡಿಸಿದ್ದ ಆದೇಶವನ್ನು ರದ್ದುಗೊಳಿಸಿ ಅಂಗಡಿಯನ್ನು ನಡೆಸಲು ಆದೇಶ ಹೊರಡಿಸಿರುವ ಬಗ್ಗೆ ಮಾನ್ಯ ಅರಣ್ಯ ಹಾಗೂ ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಸಚಿವರ ಗಮನ ಸೆಳೆಯುವುದು.

... 4/

8) **ಶ್ರೀ ಎಂ. ಕೃಷ್ಣಾರೆಡ್ಡಿ ಅವರು** – ರಾಜ್ಯದಲ್ಲಿ ಪ್ಲಾಸ್ಟಿಕ್ ಬಳಕೆ ನಿಷೇಧಿಸಿದ್ದರೂ ಸಹ ಬಹುತೇಕ ಮಾರುಕಟ್ಟೆ ಹಾಗೂ ಅಂಗಡಿಗಳಲ್ಲಿ ವಿವಿಧ ಬಗೆಯ ಏಕ ಬಳಕೆಯ ಪ್ಲಾಸ್ಟಿಕ್ ವಸ್ತುಗಳನ್ನು ಮಾರಾಟ ಮಾಡಲಾಗುತ್ತಿದ್ದು, ಇದರಿಂದ ಪರಿಸರ ಮತ್ತು ಜೀವಿಗಳ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುತ್ತಿರುವುದರಿಂದ ಸಣ್ಣ ಹಾಗೂ ಮಧ್ಯಮ ಕೈಗಾರಿಕೆಗಳಲ್ಲಿ ಪರಿಸರ ಸ್ನೇಹಿ ಹಾಗೂ ಬಹು ಉಪಯೋಗಿ ವಸ್ತುಗಳನ್ನು ತಯಾರು ಮಾಡುವ ಬಗ್ಗೆ ಮಾನ್ಯ ಜೀವಿಶಾಸ್ತ್ರ ಮತ್ತು ಪರಿಸರ ಹಾಗೂ ಪ್ರವಾಸೋದ್ಯಮ ಸಚಿವರ ಗಮನ ಸೆಳೆಯುವುದು.

9) **ಶ್ರೀ ಯು.ಟಿ. ಅಬ್ದುಲ್ ಖಾದರ್ ಅವರು** – ಮಂಗಳೂರು ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಕುಡಿಯುವ ನೀರಿನ ತೀವ್ರ ಅಭಾವ ಉಂಟಾಗಿರುವ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರ ಗಮನ ಸೆಳೆಯುವುದು.

10) **ಶ್ರೀ ಸಂಜೀವ ಮಠಂದೂರು ಅವರು** – ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ, ಪುತ್ತೂರು ವಿಭಾಗದಲ್ಲಿ ಖಾಲಿಯಿರುವ ಚಾಲಕ, ನಿರ್ವಾಹಕ ಹಾಗೂ ಮೆಕ್ಯಾನಿಕ್‌ಗಳ ಹುದ್ದೆಗಳನ್ನು ಭರ್ತಿ ಮಾಡುವ ಬಗ್ಗೆ ಮಾನ್ಯ ಸಾರಿಗೆ ಹಾಗೂ ಪರಿಶಿಷ್ಟ ಪಂಗಡಗಳ ಕಲ್ಯಾಣ ಸಚಿವರ ಗಮನ ಸೆಳೆಯುವುದು.

ಎಂ.ಕೆ.ವಿಶಾಲಾಕ್ಷಿ
ಕಾರ್ಯದರ್ಶಿ(ಪ್ರ)

ವಿಧಾನಸಭೆಯ ಕಾರ್ಯಕಲಾಪಗಳ ಪಟ್ಟಿಯನ್ನು ಅಂತರ್ಜಾಲದ ಈ ವಿಳಾಸದಲ್ಲಿ ಪಡೆದುಕೊಳ್ಳಬಹುದು
http://kla.kar.nic.in/assembly/lob/lob.htm